# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **:** | **1412** |
| **ವಿಧಾನ ಪರಿಷತ್ತಿನ ಸದಸ್ಯರ ಹೆಸರು** | **:** | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸುವ ದಿನಾಂಕ** | **:** | **20-03-2025** |
| **ಉತ್ತರಿಸುವ ಸಚಿವರು** | **:** | **ಮಾನ್ಯ ಗೃಹ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಯಚೂರು ಜಿಲ್ಲೆ, ಲಿಂಗಸೂರು ತಾಲ್ಲೂಕಿನ ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಮಂಜೂರು ಮಾಡಬೇಕೆಂದು ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಇವರು ದಿನಾಂಕ: 05-11-2024 ರ ಪತ್ರದಲ್ಲಿ ರಾಯಚೂರು ಜಿಲ್ಲೆ, ಲಿಂಗಸೂರು ತಾಲ್ಲೂಕಿನ ಹಟ್ಟಿ ಪಟ್ಟಣದಲ್ಲಿ ನೂತನವಾಗಿ ಅಗ್ನಿಶಾಮಕ ಠಾಣೆಯನ್ನು, ವಾಹನ/ಉಪಕರಣಗಳೊಂದಿಗೆ ಅಧಿಕಾರಿ / ಸಿಬ್ಬಂದಿಗಳ ಹುದ್ದೆಗಳನ್ನು ಸೃಜಿಸಿ, ಅಗ್ನಿಶಾಮಕ ಠಾಣೆಯನ್ನು ಸ್ಥಾಪಿಸಲು ಮಂಜೂರಾತಿ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದರು.<br>ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ. |
| (ಆ) | ಬಂದಿದ್ದಲ್ಲಿ, ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ, ಅಗತ್ಯ ಸಿಬ್ಬಂದಿಗಳನ್ನು ಒದಗಿಸಿ ಆ ಮೂಲಕ ಅಗ್ನಿಶಾಮಕ ಠಾಣೆ ಕಾರ್ಯಾರಂಭ ಮಾಡಲು ಇದುವರೆವಿಗೂ ಸರ್ಕಾರ ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು; | ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ನಿರ್ಮಿಸಲು ನಿವೇಶನ ಲಭ್ಯವಿರುವುದಿಲ್ಲ. ಆದ್ದರಿಂದ 2.00 ಎಕರೆ ನಿವೇಶನವನ್ನು ಉಚಿತವಾಗಿ ನೀಡುವಂತೆ ತಹಶೀಲ್ದಾರ್, ಲಿಂಗಸೂಗುರು ತಾಲ್ಲೂಕು ಇವರನ್ನು ದಿನಾಂಕ: 06-08-2024 ರ ಪತ್ರದಲ್ಲಿ ಕೋರಲಾಗಿದೆ. |
| (ಇ) | ಯಾವ ಕಾಲಮಿತಿಯೊಳಗೆ ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ ಅದು ಕಾರ್ಯಾರಂಭ ಮಾಡಲು ಸರ್ಕಾರ ಅಗತ್ಯ ಕ್ರಮ ವಹಿಸುವುದು? | ನಿವೇಶನ ದೊರೆತ ನಂತರ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು. |

**ಸಂಖ್ಯೆ: ಹೆಚ್‌ಡಿ 98 ಎಸ್‌ಎಫ್‌ಬಿ 2025**

**(ಡಾ. ಜಿ. ಪರಮೇಶ್ವರ)**
**ಗೃಹ ಸಚಿವರು**